12/12/18

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 333 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 12/12/2018 |
| 4) | ಉತ್ತರಿಸುವವರು | ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ) (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಅನುಬಂಧ-1 ರಲ್ಲಿ ಲಗತ್ತಿಸಿದೆ. |
| ಆ) | ಸರ್ಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳೆಷ್ಟು; | ಅನುಬಂಧ-2 ರಲ್ಲಿ ಲಗತ್ತಿಸಿದೆ. |
| ಇ) | ಅವುಗಳ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ಯಾವ ಕಾಲಮಿತಿಯಲ್ಲಿ ನೇಮಕಾತಿ ಮಾಡಲಾಗುವುದು; | ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br>ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆಗಳು ಬಂದ ನಂತರ ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲು ಆಡಳಿತ ಮಂಡಳಿಗೆ ಅನುಮತಿ ನೀಡಲಾಗುವುದು. |
| ಈ) | ಯಾವ ಸಾಲಿನವರೆಗೆ ಅನುದಾನರಹಿತ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ; | ಆಗಸ್ಟ್ 2000 ಕ್ಕಿಂತ ಮೊದಲು ಎನ್.ಸಿ.ವಿ.ಟಿ. ಸಂಯೋಜನೆ ಹೊಂದಿದ್ದು ಮತ್ತು 07 ವರ್ಷ ಪೂರೈಸಿರುವ ಸಂಸ್ಥೆಗಳನ್ನು ಮಾತ್ರ ವೇತನಾನುದಾನಕ್ಕೆ ಒಳಪಡಿಸಲಾಗಿದೆ. |
| ಉ) | ನಂತರದ ಸಾಲಿನಲ್ಲಿ ಪ್ರಾರಂಭಗೊಂಡ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಊ) | ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಅವು ಯಾವ ಹಂತದಲ್ಲಿವೆ; ವೇತನಾನುದಾನಕ್ಕೆ ಒಳಪಡಿಸುತ್ತಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳೆಷ್ಟು? (ಸಂಪೂರ್ಣ ವಿವರ ನೀಡುವುದು) | ದಿನಾಂಕ 21.08.2010ರ ಸರ್ಕಾರದ ಆದೇಶದನ್ವಯ ಯಾವುದೇ ಕೈಗಾರಿಕಾ ತರಬೇತಿ ಕೇಂದ್ರವನ್ನು 1997 ರ ಅನುದಾನ ಸಂಹಿತೆಗೆ ಒಳಪಡಿಸತಕ್ಕದ್ದಲ್ಲವೆಂದು ನಿರ್ಬಂಧವಿರುವ ಹಿನ್ನೆಲೆಯಲ್ಲಿ ಯಾವುದೇ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಅವಕಾಶಗಳಿರುವುದಿಲ್ಲ. |

**ಸಂಖ್ಯೆ: ಕೌಉಜೀಇ 63 ಕೈತಪ್ರ 2018**

**(ಆರ್.ವಿ. ದೇಶಪಾಂಡೆ)**
**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು**
**ಜೀವನೋಪಾಯ ಸಚಿವರು**

## ಅನುಬಂಧ–1
## ಪ್ರಶ್ನೆ ಸಂಖ್ಯೆ:333 (ಅ)

**ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಜಿಲ್ಲಾವಾರು ಸಂಖ್ಯೆ**

| ಜಿಲ್ಲೆ | ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ | ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ | ಅನುದಾನರಹಿತ ಕೈಗಾರಿಕಾ ತರಬೇತಿ ಸಂಸ್ಥೆ |
|---|---|---|---|
| ಬೆಳಗಾವಿ | 15 | 8 | 106 |
| ವಿಜಯಪುರ | 10 | 7 | 88 |
| ಬಾಗಲಕೋಟೆ | 11 | 10 | 57 |

## ಅನುಬಂಧ–2
## ಪ್ರಶ್ನೆ ಸಂಖ್ಯೆ:333 (ಆ)

**ಸರ್ಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಜಿಲ್ಲಾವಾರು ವಿವರ**

| ಜಿಲ್ಲೆ | ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ | | ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ | |
|---|---|---|---|---|
| | ಬೋಧಕ | ಬೋಧಕೇತರ | ಬೋಧಕ | ಬೋಧಕೇತರ |
| ಬೆಳಗಾವಿ | 60 | 51 | 4 | 5 |
| ವಿಜಯಪುರ | 30 | 22 | 5 | 5 |
| ಬಾಗಲಕೋಟೆ | 26 | 28 | 6 | 10 |